# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 699 |
| ಸದಸ್ಯರ ಹೆಸರು: | ಶ್ರೀ ರಘು ಆರ್ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 21.08.2026 |
| ಉತ್ತರಿಸುವ ಸಚಿವರು: | ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಆಸ್ಪತ್ರೆ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು) | ರಾಜ್ಯದಲ್ಲಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಕಾಲೇಜುಗಳ ಒಟ್ಟು ಸಂಖ್ಯೆ -18. ವಿವರ ಈ ಕೆಳಕಂಡಂತಿರುತ್ತದೆ |

| ಕ್ರ ಸಂ | ಮಹಾವಿದ್ಯಾಲಯ | ಕಾಲೇಜುಗಳ ಸಂಖ್ಯೆ |
|---|---|---|
| 1 | ಸರ್ಕಾರಿ ಮಹಾವಿದ್ಯಾಲಯ | 01 |
| 2 | ಖಾಸಗಿ ಮಹಾವಿದ್ಯಾಲಯಗಳು | 15 |
| 3 | ಡೀಮ್ಡ್ ವಿಶ್ವವಿದ್ಯಾಲಯ (ಮಹಾವಿದ್ಯಾಲಯಗಳು) | 02 |
| | **ಒಟ್ಟು** | **18** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಸದರಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಆಸ್ಪತ್ರೆ ಹಾಗೂ ಕಾಲೇಜುಗಳ ಮೂಲಭೂತ ಸೌಕರ್ಯಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಮಾಹಿತಿ ನೀಡುವುದು) | ಸರ್ಕಾರಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು ಇಲ್ಲಿನ ಮೂಲಭೂತ ಸೌಕರ್ಯಗಳಿಗೆ ರಾಷ್ಟ್ರೀಯ ಆಯುಷ್ ಅಭಿಯಾನದಡಿ ಇದುವರೆವಿಗೂ ರೂ.929.10 ಲಕ್ಷಗಳನ್ನು ಒದಗಿಸಲಾಗಿದೆ. |

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಕಾಮಗಾರಿಯ ವಿವರ | ಬಿಡುಗಡೆ/ವೆಚ್ಚ ಮಾಡಲಾದ ಅನುದಾನ |
|---|---|---|
| 1 | ಮಹಾವಿದ್ಯಾಲಯದ ನಿರ್ಮಾಣಕ್ಕಾಗಿ ಒದಗಿಸಲಾದ ಅನುದಾನ | ರೂ.855.00 |
| 2 | ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಒದಗಿಸಲಾದ ಅನುದಾನ | ರೂ.74.10 |

ಸರ್ಕಾರಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು ಇಲ್ಲಿಗೆ ಬಿಡುಗಡೆ ಮಾಡಿರುವ ಅನುದಾನದ ವಿವರ ಕೆಳಗಿನಂತಿದೆ.

(ರೂ. ಲಕ್ಷ.ಗಳಲ್ಲಿ)

| ವರ್ಷ | ಅನುದಾನ ಬಿಡುಗಡೆ | |
|---|---|---|
| | ಆಸ್ಪತ್ರೆ | ಕಾಲೇಜು |
| 2025-26 | 132.97 | 26.14 |
| 2026-27 (ಮೊದಲನೇ ತ್ರೈಮಾಸಿಕ) | 52.07 | 146.31 |

...2

| | | |
|---|---|---|
| ಇ | ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಆಸ್ಪತ್ರೆ ಹಾಗೂ ಕಾಲೇಜುಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು) | ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಆಸ್ಪತ್ರೆಯ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.<br>• ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮಹಾವಿದ್ಯಾಲಯಕ್ಕೆ 2006ರಲ್ಲಿ 25 ಸೀಟುಗಳು ಮಾತ್ರ ಲಭ್ಯವಿದ್ದು, ಹೊಸ ಆಸ್ಪತ್ರೆಯ ಕಟ್ಟಡವನ್ನು ನಿರ್ಮಿಸಿ 60 ಸೀಟುಗಳಿಗೆ ಮೇಲ್ದರ್ಜೆಗೇರಿಸಲಾಗಿದೆ.<br>• ವಿದ್ಯಾರ್ಥಿಗಳಿಗೆ ಕಲಿಕೆಗೆ ಅನುಕೂಲವಾಗಲು ಸ್ಮಾರ್ಟ್ ಕ್ಲಾಸ್, ಪ್ರೊಜೆಕ್ಟರ್, ಸಿಸ್ಟಂಗಳನ್ನು ಅಳವಡಿಸುವ ಮೂಲಕ ತರಗತಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ.<br>• ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಒದಗಿಸುವ ಸಲುವಾಗಿ 10 ತಾತ್ಕಾಲಿಕ ಅತಿಥಿ ಉಪನ್ಯಾಸಕರುಗಳ ಹುದ್ದೆಗಳನ್ನು ಸೃಜಿಸಿ ನೇಮಿಸಲಾಗಿದೆ.<br>• ರಾಷ್ಟ್ರೀಯ ಆಯುಷ್ ಅಭಿಯಾನದಡಿ ಅಂಗರಚನಾಶಾಸ್ತ್ರ (Anatomy Lab) ಪ್ರಯೋಗಾಲಯವನ್ನು ಮೇಲ್ದರ್ಜೇಗೇರಿಸಲು ಅನುದಾನ ಒದಗಿಸಲಾಗಿದೆ. |

**ಸಂಖ್ಯೆ: ಆಕುಕ 253 ಪಿಐಎಂ 2026**

**(ಯು.ಟಿ. ಖಾದರ್ ಫರೀದ್)**
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.